**2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯ ಮತ್ತು ಜೆ ಎಂ ಎಫ್ ಸಿ, ಹರಿಹರ**

**ಸಿ.ಸಿ. 3362/2025**

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.** **ಪಿಡಬ್ಲ್ಯೂ.02**

**ದಿನಾಂಕಃ** 04.12.2025 **ಸಿಡಬ್ಲ್ಯೂ.08**

| | |
|---|---|
| ಹೆಸರು | ಆನಂದಪ್ಪ |
| ತಂದೆ ಹೆಸರು | ಹನುಮಂತಪ್ಪ |
| ವಯಸ್ಸು | 45 ವರ್ಷ |
| ಉದ್ಯೋಗ | ವ್ಯವಸಾಯ |
| ವಾಸ ಸ್ಥಳ | ಕೊಕ್ಕನೂರು |

**ಮುಖ್ಯ ವಿಚಾರಣೆಃ** ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ಚಾಸಾ.1 ಮತ್ತು 9 ರವರ ಪರಿಚಯವಿಲ್ಲ. ಮೃತ ಹನುಮಮ್ಮನವರ ಪರಿಚಯವಿಲ್ಲ. ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಅದರಲ್ಲಿ ತನ್ನ ಸಹಿಯನ್ನು ಗುರುತಿಸಿದ್ದು ಅದು ಸ್ಥಳ ಪಂಚನಾಮೆ ಆಗಿದ್ದು ಅದನ್ನು ಈಗಾಗಲೇ ನಿಪಿ.2 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ.2 (ಬಿ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಇನ್ನೊಂದು ದಾಖಲೆಯನ್ನು ತೋರಿಸಲಾಗಿ ಅದರಲ್ಲಿ ತನ್ನ ಸಹಿಯನ್ನು ಗುರುತಿಸಿದ್ದು ಅದು ಕಚ್ಚಾ ನಕಾಶೆ ಆಗಿದ್ದು ಅದನ್ನು ಈಗಾಗಲೇ ನಿಪಿ.3 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ.3 (ಬಿ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ನಾನು ಸುಮಾರು 6 ತಿಂಗಳ ಹಿಂದೆ ಮಲೆಬೆನ್ನೂರು ಠಾಣೆಯಲ್ಲಿ ಮಾಡಿರುತ್ತೇನೆ. ಯಾವ ಕಾರಣಕ್ಕಾಗಿ ಸಹಿ ಮಾಡಿದ್ದೇನೆ ಎಂದು ಗೊತ್ತಿಲ್ಲ. ಪೊಲೀಸರ ಕೋರಿಕೆ ಮೇರೆಗೆ ನಿಪಿ.2 ಮತ್ತು 3 ಸಹಿ ಮಾಡಿದ್ದೇನೆ. ಸಾಕ್ಷಿಗೆ 1 ಛಾಯ ಚಿತ್ರ ತೋರಿಸಲಾಗಿ ಅದರಲ್ಲಿ ತಾವು ಇರುವುದಾಗಿ ಒಪ್ಪಿದ್ದು ಅದನ್ನು ಈಗಾಗಲೇ ನಿಪಿ.4 ಎಂದು ಗುರುತಿಸಲಾಗಿದೆ. ಸದರಿ ಫೋಟೋವನ್ನು ಯಾವ ಕಾರಣಕ್ಕಾಗಿ ತೆಗೆದಿರುತ್ತಾರೆ ಎಂದು ಗೊತ್ತಿಲ್ಲ. ಸಾಕ್ಷಿಗೆ ಇನ್ನೊಂದು ದಾಖಲೆಯನ್ನು ತೋರಿಸಲಾಗಿ ಅದರಲ್ಲಿ ತನ್ನ ಸಹಿಯನ್ನು ಗುರುತಿಸಿದ್ದು ಅದು ಪಂಚರಿಗೆ ನೀಡಿದ ನೋಟಿಸ್ ಆಗಿದ್ದು ಅದನ್ನು ನಿಪಿ.5 ಎಂದು ಸಾಕ್ಷಿಯ ಸಹಿಯನ್ನು ನಿಪಿ.5 (ಎ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಠಾಣೆಯಲ್ಲಿ ಮಾಡಿರುತ್ತೇನೆ. ಪೊಲೀಸರಿಗೆ ಯಾವುದೇ ಹೇಳಿಕೆ ನೀಡಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲು ಮಾನ್ಯ ಎಪಿಪಿ ಯವರು ಕೋರಿದ್ದು, ಸಂಗತಿಗಳನ್ನು ಪರಿಶೀಲಿಸಲಾಗಿ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಅವರಿಗೆ ಪಾಟೀಸವಾಲು ಮಾಡಲು ಅನುಮತಿಸಲಾಯಿತು)

**ಪಾಟೀ ಸವಾಲುಃ ಸಸಅ ರವರಿಂದಃ**

ಮೃತ ಹನುಮಮ್ಮ ನವರಿಗೆ ವಯಸ್ಸಾಗಿದ್ದು ಕೈಕಾಲು ನಡುಕ ಮತ್ತು ಅನಾರೋಗ್ಯ ಇರುವುದು ಗೊತ್ತಿದ್ದರೂ ಸಹ ಹಾಗೂ ಬೈಕನಲ್ಲಿ ಕುಳಿತುಕೊಳ್ಳುವಷ್ಟು ಶಕ್ತಿ ಇಲ್ಲದೇ ಇದ್ದರೂ ಸಹ ಅವರನ್ನು ಆರೋಪಿ ಕೆಎ/17 ಹೆಚ್ ಎಂ 8248 ಬೈಕನಲ್ಲಿ ಕೂರಿಸಿಕೊಂಡು ನಿರ್ಲಕ್ಷ್ಯತನದಿಂದ ಅಡಿಕೆ ಹೊಲದಲ್ಲಿ ಚಾಲನೆ ಮಾಡಿಕೊಂಡು ಬಂದು ಬದುವನ್ನು ಹತ್ತಿಸಿದ್ದರಿಂದ ಅಪಘಾತ ಸಂಭವಿಸಿದ್ದು ಆ ವಿಚಾರವಾಗಿ ಪಂಚನಾಮೆ ಮಾಡಬೇಕು ಸಹಕರಿಸಿ ಎಂದು ಕೇಳಿಕೊಂಡ ಮೇರಗೆ ನಾನು ಒಪ್ಪಿ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಆಗ ನನ್ನ ಹಾಗೂ ಚಾಸಾ.9 ರವರ ಸಮಕ್ಷಮ ಮದ್ಯಾಹ್ನ 2.30 ರಿಂದ 3.30 ಗಂಟೆಗೆ ಪಂಚನಾಮೆ ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಸಂದರ್ಭದಲ್ಲಿ ನಿಪಿ.2 ರಂತೆ ಪಂಚನಾಮೆ ಜರುಗಿಸಿ ನಿಪಿ.3 ರಂತೆ ಕಚ್ಚಾ ನಕಾಶೆ ತೆಗೆದು ನಿಪಿ.4 ರಂತೆ ಫೋಟೋ ತೆಗೆದಿರುತ್ತಾರೆ ಎಂದರೆ ಸರಿಯಲ್ಲ. ನಾನು ಈ ಕುರಿತು ಪೊಲೀಸರಿಗೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಗುರುತಿಸಲು ನಿರಾಕರಿಸಿದ ಹೇಳಿಕೆಯನ್ನು ನಿಪಿ.6 ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ ಇಲ್ಲ.**

**ಮರುವಿಚಾರಣೆ ಇಲ್ಲ.**

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

Sd/-

2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು

ಮತ್ತು ಜೆಎಂಎಫ್‌ಸಿ, ಹರಿಹರ